ಸಣ್ಣ ನೀರಾವರಿಯ ಕಾಮಗಾರಿಗಳು

91(158) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಅರಣ್ಯ ಪ್ರದೇಶದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಸಣ್ಣ ಸಣ್ಣ ಕೆರೆಗಳು ಮತ್ತು ಚೆಕ್ ಡ್ಯಾಂಗಳನ್ನು ನಿರ್ಮಾಣ ಮಾಡಲು ಅರಣ್ಯ ಇಲಾಖೆಯವರು ಅಡ್ಡಿಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಗೋವಿಂದ ಎಂ. ಕಾರಜೋಳ (ಮಾನ್ಯ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು)

ಅ) ಹೌದು.

ಆ) ಇಲಾಖಾ ವತಿಯಿಂದ ಸ್ಥಳೀಯ ಅರಣ್ಯ ಅಧಿಕಾರಿಗಳನ್ನು ಸಂಪರ್ಕಿಸಿ ನಿಯಮಾನುಸಾರ ಅರಣ್ಯ ಪ್ರದೇಶವನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಿದ್ಧಸ್ವಾಮಿ ಗುಡ್ಡದ ಹತ್ತಿರ ಹೊಸಕೆರೆ ನಿರ್ಮಾಣ ಕಾಮಗಾರಿ ಮತ್ತು ಹಂಡಿತವಳ್ಳಿ ಕೆರೆ ಕಾಮಗಾರಿಗಳಿಗೆ ಅರಣ್ಯ ಇಲಾಖೆಯಿಂದ ಜಮೀನು ಹಸ್ತಾಂತರವಾಗದ ಕಾರಣ ಸ್ಥಗಿತಗೊಂಡಿರುತ್ತವೆ.

ಬಗರ್ ಹುಕುಂ ಸಾಗುವಳಿ ಜಮೀನುಗಳು

92(159) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಬಗರ್ ಹುಕುಂ ಸಾಗುವಳಿಯಲ್ಲಿ ಬಡವರಿಗೆ ಮಂಜೂರಾಗಿರುವ ಜಮೀನನ್ನು ದುರಸ್ತಿಪಡಿಸದಿರುವುದರಿಂದ ರೈತರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು)